# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (110) 29

ಸದಸ್ಯರ ಹೆಸರು : ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 08-12-2025

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ, ಅನುದಾನಿತ ಹಾಗೂ ದಾಖಲಾತಿಗೆ ಲಭ್ಯವಿರುವ ದಾಖಲಾತಿ ಆಗಿರುವ ಮತ್ತು ದಾಖಲಾತಿ ಇಲ್ಲದೇ ಖಾಲಿ ಇರುವ ಸೀಟುಗಳ ಪ್ರಮಾಣ ಎಷ್ಟು;</td><td>2025-26ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 2,77,507 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಯನ್ನು ನಿರ್ದಿಷ್ಟಪಡಿಸಿರುವುದಿಲ್ಲ.<br><br>ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ.<br><table><tr><th>ದಾಖಲಾತಿಗೆ ಲಭ್ಯವಿರುವ ಸೀಟುಗಳ ಸಂಖ್ಯೆ</th><th>ದಾಖಲಾತಿ ಆಗಿರುವ ಸೀಟುಗಳು ಸಂಖ್ಯೆ</th><th>ದಾಖಲಾತಿ ಆಗದೆ ಉಳಿದಿರುವ ಸೀಟುಗಳ ಸಂಖ್ಯೆ</th></tr><tr><td>225200</td><td>91957</td><td>133243</td></tr></table></td></tr>
<tr><td>ಆ)</td><td>ಕಳೆದ ಮೂರು ವರ್ಷಗಳಲ್ಲಿ ಎಷ್ಟು ಖಾಸಗಿ ಪಿ.ಯು ಕಾಲೇಜುಗಳಿಗೆ ಅನುಮತಿ ನೀಡಲಾಗಿದೆ; ಹಾಗೂ ಪ್ರಾರಂಭಿಸಲಾಗಿದೆ: ಎಷ್ಟು ಸರ್ಕಾರಿ ಕಾಲೇಜು/ ಅನುದಾನಿತ ಪಿ.ಯು ಕಾಲೇಜುಗಳನ್ನು ಮುಚ್ಚಲಾಗಿದೆ;</td><td>• ಕಳೆದ ಮೂರು ವರ್ಷಗಳು ಅಂದರೆ 2022-23, 2023-24 ಮತ್ತು 2024-25ರಲ್ಲಿ ಒಟ್ಟು393 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ.<br>• ಕಳೆದ ಮೂರು ವರ್ಷಗಳಲ್ಲಿ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮುಚ್ಚಲಾಗಿರುವುದಿಲ್ಲ, ಬದಲಾಗಿ 2022-23 ರಿಂದ, 2024-25ರಲ್ಲಿ ಶೂನ್ಯ ದಾಖಲಾತಿ ಹೊಂದಿರುವ ಒಟ್ಟು 11 ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಅತೀ ಹೆಚ್ಚು ಬೇಡಿಕೆ ಇರುವ ಸ್ಥಳಗಳಿಗೆ ಹುದ್ದೆಗಳ ಸಮೇತ ಸ್ಥಳಾಂತರಿಸಲಾಗಿರುತ್ತದೆ.<br>• 2022-23 ರಿಂದ 2024-25ರಲ್ಲಿ ಒಟ್ಟು 07 ಅನುದಾನಿತ ಪದವಿ ಪೂರ್ವ ಕಾಲೇಜುಗಳನ್ನು ಮುಚ್ಚಲಾಗಿದೆ.,</td></tr>
<tr><td>ಇ)</td><td>ಶಿಕ್ಷಣವನ್ನು ವ್ಯಾಪಾರದ ಸರಕಾಗಿಸಿಕೊಂಡಿರುವ ಖಾಸಗಿ ಕಾಲೇಜುಗಳ ಶೈಕ್ಷಣಿಕ ಮಾಫೀಯಾಕ್ಕೆ ತಡೆ ಮಾಡಲು ಹಾಗೂ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ.</td><td>• ಸರ್ಕಾರದ ಆದೇಶ ಸಂಖ್ಯೆ:ಇಡಿ 195 ಡಿಜಿಡಿ 2017 ದಿನಾಂಕ:20.03.2018ರಲ್ಲಿ ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ತೆಗೆದುಕೊಳ್ಳುವಂತೆ ಇಲಾಖೆಯಿಂದ ಸೂಚಿಸಲಾಗಿದೆ.<br>• ಒಂದು ವೇಳೆ ಸರ್ಕಾರ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ಪಡೆದುಕೊಂಡಲ್ಲಿ ಅಂತಹ ಕಾಲೇಜಿನ ವಿರುದ್ಧ ಜಿಲ್ಲಾ ಹಂತದಲ್ಲಿನ District Education Regulatory Authority (DERA) ಸಮಿತಿಗೆ ದೂರನ್ನು ನೀಡಬಹುದಾಗಿದೆ. District Education Regulatory Authority (DERA) ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿಯವರು ದೂರನ್ನು ಪರಿಶೀಲಿಸಿ ಕ್ರಮವಹಿಸುತ್ತಾರೆ.<br><br>ಸರ್ಕಾರಿ ಶಾಲೆಗಳ ಬಲವರ್ಧನೆಗೆ ಸರ್ಕಾರ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿದೆ.<br>• ಪ್ರತೀ ಶೈಕ್ಷಣಿಕ ವರ್ಷದ ಆರಂಭದಲ್ಲಿ ದಾಖಲಾತಿ</td></tr>
</table>

| | | |
|---|---|---|
| | | ಆಂದೋಲನ ಕಾರ್ಯಕ್ರಮ ನಡೆಸಲಾಗುವುದು.<br>• ಮಹತ್ವಕಾಂಕ್ಷಿ ತಾಲ್ಲೂಕುಗಳಲ್ಲಿ ವಿಜ್ಞಾನ ಸಂಯೋಜನೆಯನ್ನು ಹೊಂದಿರುವ ಆಯ್ದ 60 ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಆದರ್ಶ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಪರಿವರ್ತಿಸಲಾಗಿದೆ.<br>• ಪ್ರಸ್ತುತ 1 ರಿಂದ 10ನೇ ತರಗತಿಯವರೆಗಿನ ಆಯ್ದ 74 ಆದರ್ಶ ವಿದ್ಯಾಲಯಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳನ್ನು ಪ್ರಾರಂಭಿಸಿ ಉನ್ನತೀಕರಿಸಲಾಗಿದೆ.<br>• ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ಹೆಣ್ಣುಮಕ್ಕಳಿಗೆ ರೂ.456/-ರಂತೆ ಶುಲ್ಕ ವಿನಾಯಿತಿಯನ್ನು ನೀಡಲಾಗುತ್ತಿದೆ.<br>• ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿಜ್ಞಾನ ಸಂಯೋಜನೆಯನ್ನು ಹೊಂದಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಯೋಗಾಲಯಗಳನ್ನು ಉನ್ನತೀಕರಿಸಲಾಗಿದೆ.<br>• ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯಲ್ಲಿ ವಿವಿಧ ಯೋಜನೆಗಳಡಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳಾದ ಕಟ್ಟಡ ನಿರ್ಮಾಣ/ಹೆಚ್ಚುವರಿ ತರಗತಿ ಕೊಠಡಿ/ಪ್ರಯೋಗಾಲಯ ಕೊಠಡಿ/ ಶೌಚಾಲಯ ಬ್ಲಾಕ್ ನಿರ್ಮಾಣ ಹಾಗೂ ಕಟ್ಟಡ/ತರಗತಿ ಕೊಠಡಿಗಳ ದುರಸ್ತಿ/ನವೀಕರಣ ಇತ್ಯಾದಿಗಳನ್ನು ಇಲಾಖೆಗೆ ಒದಗಿಸಲಾದ ಅನುದಾನದ ಲಭ್ಯತೆಯ ಆಧಾರದ ಮೇಲೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಒದಗಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಇವುಗಳ ಜೊತೆಗೆ ಪೀಠೋಪಕರಣ /ಡೆಸ್ಕ್ ಮತ್ತು ವಿಜ್ಞಾನ ವಿಭಾಗದ ಪ್ರಯೋಗಾಲಯ ಕೊಠಡಿಗಳಿಗೆ ಪ್ರಯೋಗಾಲಯ ಉಪಕರಣಗಳನ್ನು ಸಹ ಒದಗಿಸಲಾಗುತ್ತಿದೆ. |
| ಈ) | ಸರ್ಕಾರಿ ಪಿ.ಯು ಕಾಲೇಜುಗಳಲ್ಲಿಯೂ ಖಾಸಗಿ ಸಂಸ್ಥೆಗಳಲ್ಲಿರುವಂತೆ NEET, Engineering CET ಸೇರಿದಂತೆ ಉಳಿದ ಉನ್ನತ ವ್ಯಾಸಂಗದ ಪ್ರವೇಶ ಪರೀಕ್ಷಾ ತರಬೇತಿಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ? | • ವಿದ್ಯಾವಿಜೇತ ಕಾರ್ಯಕ್ರಮದಡಿ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿಯೂ ಸಹ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ CET NEET/ JEE ONLINE ತರಬೇತಿ ತರಗತಿಗಳನ್ನು ನೀಡಲಾಗುತ್ತಿದೆ.<br>• 2024-25ನೇ ಮತ್ತು 2025-26ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಪಿಯುಸಿಯ ಒಟ್ಟು 12,500 ವಿದ್ಯಾರ್ಥಿಗಳು ಮತ್ತು ದ್ವಿತೀಯ ಪಿಯುಸಿಯ ಒಟ್ಟು12,500 ವಿದ್ಯಾರ್ಥಿಗಳು ತರಬೇತಿ ಪಡೆದಿದ್ದಾರೆ.<br>• ಖಾನ್ ಅಕಾಡೆಮಿ ವತಿಯಿಂದ ಜ್ಞಾನಸೇತು ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. |

ಸಂಖ್ಯೆ: ಇಪಿ 376 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು